## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ರವರ ನ್ಯಾಯಾಲಯ, ಶಿಡ್ಲಘಟ್ಟ

ಸಿ.ಸಿ.716/2017

| | | | |
|---|---|---|---|
| ಸಾಕ್ಷಿದಾರರ ಹೆಸರು | ಃ | ಕೆ ವಿ ದ್ಯಾವಪ್ಪ | ಸಿಡಬ್ಲೂಃ **6** |
| ತಂದೆ ಹೆಸರು | ಃ | ವೆಂಕಟರಾಯಪ್ಪ | ಪಿಡಬ್ಲೂಃ **7** |
| ವಯಸ್ಸು | ಃ | 43 ವರ್ಷ | ಪ್ರಮಾಣೀಕರಿಸಲಾದ ದಿನಾಂಕ |
| ವೃತ್ತಿ | ಃ | ಗಾರೆ ಕೆಲಸ | 12.08.2026 |
| ವಾಸ ಸ್ಥಳ | ಃ | ಕಣ್ಣಪ್ಪನಹಳ್ಳಿ ಗ್ರಾಮ, ಶಿಡ್ಲಘಟ್ಟ ತಾಲ್ಲೂಕು. | |

ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು.
ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ಯವರಿಂದಃ

ಸಾಕ್ಷಿಗೆ ಈಗಾಗಲೇ ಗುರುತಿಸಿರುವ ನಿಪಿ-**4** ಸ್ಥಳ ಪಂಚನಾಮೆಯನ್ನು ತೋರಿಸಲಾಗಿ, ಅದಲ್ಲಿರುವ ತಮ್ಮ ಸಹಿಯನ್ನು ಗುರುತಿಸಿದ ಮೇರೆಗೆ ಸಹಿಯನ್ನು ನಿ.ಪಿ.**4**(ಡಿ) ಎಂದು ಗುರುತಿಸಲಾಯಿತು. ನಿಪಿ-**4** ಕ್ಕೆ ಚಿಕ್ಕಬಳ್ಳಾಪುರ ರಸ್ತೆಯಲ್ಲಿ ಪೋಲೀಸರ ಕೋರಿಗೆ ಮೇರೆಗೆ ಸಹಿ ಹಾಕಿರುತ್ತೇನೆ. ನಿ.ಪಿ.**4** ರಲ್ಲಿ ಬರೆದಿರುವ ಸಂಗತಿಗಳು ನನಗೆ ಗೊತ್ತಿಲ್ಲ. ನಿಪಿ-4ರ ಕಾಲಕ್ಕೆ ನನ್ನ ಸಮಕ್ಷಮ ಯಾವುದೇ ವಾಹನಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ.

(ಸಾಕ್ಷಿಯು ಅಭಿಯೋಜನೆ ಪ್ರಕರಣಕ್ಕೆ ವ್ಯತಿರಿಕ್ತ ಸಾಕ್ಷ್ಯ ನುಡಿದಿದ್ದರಿಂದ, ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಯಿತು.)

ಪಾಟೀ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕ ರವರಿಂದಃ

ದಿನಾಂಕಃ**07.12.2016** ರಂದು ಶಿಡ್ಲಘಟ್ಟ - ಚಿಕ್ಕಬಳ್ಳಾಪುರ ಮುಖ್ಯ ರಸ್ತೆಯಲ್ಲಿ ಹೊಸದಾಗಿ ನಿರ್ಮಾಣ ಮಾಡುತ್ತಿದ್ದ ಮೋರಿ ಸ್ಥಳದಲ್ಲಿ ಮದ್ಯಾಹ್ನ **2.00** ರಿಂದ **3.00** ಗಂಟೆಯ ಸಮಯದಲ್ಲಿ ಒಬ್ಬ ವ್ಯಕ್ತಿ ದ್ವಿಚಕ್ರ ವಾಹನದಲ್ಲಿ ಬಿದ್ದು ಮೃತ ಪಟ್ಟ ವಿಚಾರದಲ್ಲಿ ಸ್ಥಳ ಪಂಚನಾಮೆ ಮಾಡಿದ ಕಾಲಕ್ಕೆ ಹಾಜರಿದ್ದು, ನಿಪಿ-**4** ರಲ್ಲಿ ಬರೆದಿರುವ ವಿಚಾರಗಳನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಿಪಿ-4ರ ಕಾಲಕ್ಕೆ ಈಗ ತೋರಿಸುತ್ತಿರುವ ಭಾವಚಿತ್ರದಲ್ಲಿರುವ ವಾಹನವನ್ನ ಅಮಾನತ್ತುಪಡಿಸಿಕೊಳ್ಳಲಾಯಿತು ಎಂದರೆ ಸರಿಯಲ್ಲ. ನಿಪಿ-4ರಲ್ಲಿ ಬರೆದಿರುವ ವಿಚಾರಗಳನ್ನು

ತಿಳಿದುಕೊಂಡು ಘಟನಾ ಸ್ಥಳದಲ್ಲಿ ಸಹಿ ಮಾಡಿದ್ದು, ಆರೋಪಿಯೊಂದಿಗೆ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಆರೋಪಿ ಪರ ವಕೀಲರಿಂದಃ ಪಾಟಿ ಸವಾಲು ಇಲ್ಲ ಎನ್ನುತ್ತಾರೆ.

(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿ ಇದೆ.

ಸಹಿ/-

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದಂ. ಶಿಡ್ಲಘಟ್ಟ.